**ದಿನಾಂಕ: 03-09-2022 ರಂದು ಬೆಳಗ್ಗೆ 11:00 ಗಂಟೆಗೆ ವಾರ್ಡ್ ಸಂಖ್ಯೆ 167 ಯಡಿಯೂರು ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

*ಹಾಜರಿದ್ದ ಅಧಿಕಾರಿಗಳು:-*

1. ಶ್ರೀ. ರಘು – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು. (ಜಂಟಿ ನಿರ್ದೇಶಕರು ನಗರ-ಯೋಜನೆ)
2. ಶ್ರೀ. ನವೀನ್ ಕುಮಾರ್. ಎಸ್ – ಸಹಾಯಕ ಅಭಿಯಂತರರು ಮತ್ತು ಸಂಚಾಲಕರು (ಕಿಯೋನಿಕ್ಸ್) (ವಾರ್ಡ್ 167 ಯಡಿಯೂರು)
3. ಶ್ರೀ. ಮಂಜುನಾಥ್. ಆರ್ – ಹಿ.ಆ.ಪ- (ವಾರ್ಡ್ 167 ಯಡಿಯೂರು)
4. ಶ್ರೀ. ನರಸಿಂಹಲು – ಕಿ.ಆ.ಪ- (ವಾರ್ಡ್ 167 ಯಡಿಯೂರು)

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 167 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ವಾರ್ಡ್ ಸಮಿತಿ ಸಭೆಯಲ್ಲಿ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ವಾರ್ಡ್ ವ್ಯಾಪ್ತಿಯ ಜಲಮಂಡಳಿ, ಬೆಸ್ಕಾಂ, ಘನತ್ಯಾಜ್ಯ ವಿಲೇವಾರಿ, ಆರೋಗ್ಯ ಇಲಾಖೆ, ಕಂದಾಯ, ಕಾಮಗಾರಿ ಇಲಾಖೆಗಳಿಗೆ ಸಂಬಂಧಿಸಿದಂತೆ ಪ್ರಸ್ತುತ ಇರುವ ಸಮಸ್ಯೆಗಳು ಹಾಗೂ ಪರಿಹಾರೋಪಾಯಗಳು ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ವಾರ್ಡ್ ವ್ಯಾಪ್ತಿಯಲ್ಲಿ ವಿಪರೀತ ಮಳೆಯಿಂದಾಗಿ ಕೆಲವು ಕಡೆ ರಸ್ತೆಗುಂಡಿಗಳಾಗಿರುತ್ತದೆ. ಸದರಿ ರಸ್ತೆ ಗುಂಡಿಗಳನ್ನು ಮುಚ್ಚಲು ಅಗತ್ಯಕ್ರಮ ಕೈಗೊಳ್ಳುವ ಬಗ್ಗೆ ಅಧ್ಯಕ್ಷರು ಸೂಚಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ಹಾಳಾಗಿರುವ ರಸ್ತೆಗಳಿಗೆ ಸಾರ್ವಜನಿಕರಿಂದ ಹಿತದೃಷ್ಟಿಯಿಂದ ಡಾಂಬರೀಕರಣ ಮಾಡಿಸುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ಕೆಲವು ರಸ್ತೆಗಳ ಬೀದಿ ದೀಪಗಳು ಕಾರ್ಯನಿರ್ವಹಿಸುತ್ತಿರುವುದಿಲ್ಲ. ಆದ್ದರಿಂದ ಸದರಿ ಬೀದಿ ದೀಪಗಳನ್ನು ಸರಿಪಡಿಸಿಕೊಡುವಂತೆ ಸಾರ್ವಜನಿಕರು ಕೋರಿದರು. ಸದರಿ ಬೀದಿ ದೀಪಗಳನ್ನು ಸರಿ ಪಡಿಸಿಕೊಡುವಂತೆ

ಪು.ತಿ.ನೋ

ಪ್ರಸ್ತುತ ಚುನಾವಣೆ ಸಂಬಂಧ ಪ್ರಕಟಿಸಲಾಗಿರುವ ಕರಡು ಮತದಾರರ ಪಟ್ಟಿ ಸಂಬಂಧ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವ ಅವಧಿಯನ್ನು ಇನ್ನು 7 ದಿನಗಳವರೆಗೆ ವಿಸ್ತಲಿಸಲಾಗಿರುತ್ತದೆ ಎಂದು ತಿಳಿಸಲಾಯಿತು. ಮತದಾರರ ಗುರುತಿನ ಚೀಟಿಗೆ ಆಧಾರ್ ಜೋಡಣೆ ಮಾಡುವುದು ಹಾಗೂ 2023ನೇ ಸಾಲಿನ ಮತದಾರರ ಪಟ್ಟಿ ಪರಿಷ್ಕರಣೆಯ ಕಾರ್ಯ ನಡೆಯುತ್ತಿದ್ದು, ವಾರ್ಡ್ ವ್ಯಾಪ್ತಿಯ ಮತದಾರರ ಪಟ್ಟಿಯಲ್ಲಿ ಹೆಸರು ನೊಂದಾಯಿಸಲು ನಮೂನೆ–6, ತೆಗೆದುಹಾಕಲು ನಮೂನೆ–7 ಮತ್ತು ತಿದ್ದುಪಡಿಗೊಳಿಸಲು ನಮೂನೆ–8 ರಲ್ಲಿ ಅರ್ಜಿಯನ್ನು ಸಲ್ಲಿಸುವಂತೆ ಸಾರ್ವಜನಿಕರಿಗೆ ಕಂದಾಯ ಇಲಾಖೆ ಅಧಿಕಾರಿಗಳು ವಿವರಿಸಿದರು.

ವಾರ್ಡ್ ಸಂಖ್ಯೆ 167 ರಲ್ಲಿನ ಎಲ್ಲಾ ಭಾಗಗಳ ಘನತ್ಯಾಜ್ಯ ವಿಲೇವಾರಿಯು ಸಮರ್ಪಕವಾಗಿ ನಡೆಯುತ್ತಿರುತ್ತದೆ. ಸಿವಿಲ್ ಕಾಮಗಾರಿಗಳು ಹಾಗೂ ಇನ್ನಿತರೆ ಕೆಲಸ ಕಾರ್ಯಗಳು ಸಮರ್ಪಕವಾಗಿ ನಡೆಯುತ್ತಿದ್ದು ಮುಂದಿನ ದಿನಗಳಲ್ಲಿ ಇದೇ ರೀತಿ ಮುಂದುವರೆಸುವಂತೆ ಅಭಿಪ್ರಾಯಿಸಿದರು.

ಮೇಲಿನ ವಿಷಯಗಳ ಬಗ್ಗೆ ನವೀನ್ ಕುಮಾರ್. ಎಸ್ ರವರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿನ ಮೂಲಭೂತ ಸೌಕರ್ಯಗಳಾದ ರಸ್ತೆಗುಂಡಿ ಮುಚ್ಚುವಿಕೆ, ಕಟ್ಟಡ ತ್ಯಾಜ್ಯ ವಿಲೇವಾರಿ, ಘನತ್ಯಾಜ್ಯ ವಿಲೇವಾರಿ, ಬೆಸ್ಕಾಂ ಸಂಬಂಧಿತ, ಜಲಮಂಡಳಿ ಸಂಬಂಧಿತ, ಆರೋಗ್ಯ ಇಲಾಖೆ ಹಾಗೂ ಇನ್ನಿತರೆ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಸಮರ್ಪಕ ಕಾರ್ಯನಿರ್ವಹಣೆಯ ಬಗ್ಗೆ ಆಯಾ ಇಲಾಖೆಗಳ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸದಸ್ಯರಿಗೆ ಮತ್ತು ಅಧ್ಯಕ್ಷರಿಗೆ ವಿವರಿಸಿದರು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಶ್ರೀ. ರಘು ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

05/09/22.

ನೋಡೆಲ್ ಅಧಿಕಾರಿಗಳು
ವಾರ್ಡ್ 167